ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	771
ಮಾನ್ಯ ಸದಸ್ಯರ ಹೆಸರು	ಶ್ರೀ ಕೆ.ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	17.12.2018
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಹಿಂದುಳಿದ ವರ್ಗದ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ, ಕಳಪೆ ಗುಣಮಟ್ಟದ ಆಹಾರ ಪೂರೈಕೆ ಹಾಗೂ ಭದ್ರತಾ ವ್ಯವಸ್ಥೆಯು ದುಸ್ಥಿತಿಗೆ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಕುರಿತಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಕೈಗೊಂಡಿರುವ ಕ್ರಮಗಳೇನು ? (ವಿಸ್ತೃತ ಮಾಹಿತಿ ನೀಡುವುದು	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ದುಸ್ಥಿತಿಗೆ ತಲುಪಿರುವ ವಿದ್ಯಾರ್ಥಿನಿಲಯಗಳು ಯಾವುದೂ ಇರುವುದಿಲ್ಲ. ಆದರೆ, ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಲವೊಂದು ವಿದ್ಯಾರ್ಥಿನಿಲಯಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಒಟ್ಟು 2438 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿ ನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ನಿಗದಿಪಡಿಸಿದ ಭೋಜನಾ ವೆಚ್ಚದ ದರಗಳಲ್ಲಿ ಗುಣಮಟ್ಟದ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿರುತ್ತದೆ. ವಿದ್ಯಾರ್ಥಿನಿಲಯಗಳಲ್ಲಿನ ಆಹಾರದ ಗುಣಮಟ್ಟವನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಪ್ರತಿ ವರ್ಷವೂ ಭೋಜನಾ ವೆಚ್ಚದ ದರಗಳನ್ನು ಹೆಚ್ಚಿಸಲಾಗುತ್ತಿದ್ದು, 2018-19ನೇ ಸಾಲಿನಲ್ಲಿ ಆಹಾರ ವೆಚ್ಚದ ದರಗಳನ್ನು ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ರೂ.1400/- ರಿಂದ ರೂ.1500/- ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ರೂ.1500/- ರಿಂದ ರೂ.1600/- ಕ್ಕೆ ಹೆಚ್ಚಿಸಲಾಗಿದೆ. ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಸಿ.ಸಿ ಕ್ಯಾಮೆರಾವನ್ನು ಅಳವಡಿಸುವುದರ ಜೊತೆಗೆ, ರಾತ್ರಿ ಕಾವಲುಗಾರರನ್ನು ಸಹ ನೇಮಕ ಮಾಡಿ ವಿದ್ಯಾರ್ಥಿನಿಯರಿಗೆ ಸುರಕ್ಷತೆಯನ್ನು ನೀಡಲಾಗುತ್ತಿದೆ. ಮೂಲಭೂತ ಸೌಕರ್ಯ ಕೊರತೆ ಇರುವ ವಿದ್ಯಾರ್ಥಿ ನಿಲಯಗಳಿಗೆ ಅನುದಾನ ಲಭ್ಯತೆಗನುಗುಣವಾಗಿ ಹಂತ ಹಂತವಾಗಿ ಕಂಪ್ಯೂಟರ್, ದೂರವಾಣಿ, ಇಂಟರ್ ನೆಟ್, ವೆಬ್ ಕ್ಯಾಮಾರಾ, ಸೋಲಾರ್ ಲೈಟ್, ಟಿ.ವಿ, ಸೋಲಾರ್ ವಾಟರ್ ಹೀಟರ್, ಶುದ್ಧ ಕುಡಿಯುವ ನೀರಿಗಾಗಿ ವಾಟರ್ ಪ್ಯೂರಿಫೈಯರ್ ಹಾಗೂ ಗ್ರಂಥಾಲಯ ಹಾಗೂ ಶುದ್ಧ ಕುಡಿಯುವ ನೀರು ಘಟಕ ಸ್ಥಾಪನೆ, ಗ್ರಂಥಾಲಯ ಸೌಕರ್ಯ, ಹಾಸಿಗೆ-ಹೊದಿಕೆ ಇತ್ಯಾದಿಗಳನ್ನು ಒದಗಿಸಲಾಗುತ್ತಿದೆ. ಇದಕ್ಕಾಗಿ ಕಳೆದ 3 ವರ್ಷಗಳಲ್ಲಿ ರೂ.8985.58 ಲಕ್ಷಗಳನ್ನು ವಿನಿಯೋಗಿಸಲಾಗಿದೆ.

ಸಂ: ಹಿಂವಕ 1269 ಬಿಎಂಎಸ್ 2018

(ಸಿ.ಪುಟ್ಟರಂಗಶೆಟ್ಟಿ)
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.